6457

File No. FD/14/BGL/2022-FRC-FINANCE DEPT.SEC (Computer No. 696098)

R|R

ವಿ-72
ಕ್ರ-58

## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72ರಡಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಬಗ್ಗೆ.**

ಪ್ರಶ್ನೆ:

ಕೋವಿಡ್ 19 ಸಮಸ್ಯೆಯ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯಿಂದ ಹೊರಡಿಸಲಾದ ಆರ್ಥಿಕ ಮಿತವ್ಯಯ ಆದೇಶವನ್ನು ಸಂಪೂರ್ಣವಾಗಿ ಹಿಂಪಡೆಯುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯ ಬಯಸುತ್ತೇನೆ.

ಮಾನ್ಯ ಮುಖ್ಯಮಂತ್ರಿಗಳ ಉತ್ತರ:

ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸಲು 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ತಡೆಹಿಡಿಯಲಾಗಿತ್ತು.

ಆದಾಗ್ಯೂ, ಅಭ್ಯರ್ಥಿಗಳ ಸೇವಾಹಿರಿತನದಲ್ಲಿ ತೊಂದರೆಯಾಗಬಾರದು ಎಂಬ ಅಂಶವನ್ನು ಪರಿಗಣಿಸಿ, ಕರ್ನಾಟಕ ಲೋಕಸೇವಾ ಆಯೋಗ/ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮತ್ತು ಇನ್ನಿತರೆ ಆಯ್ಕೆ ಮಂಡಳಿಗಳಿಂದ ಒಂದೇ ಅಧಿಸೂಚನೆಯಡಿ ಒಂದು ಇಲಾಖೆಯಲ್ಲಿ ಆಯ್ಕೆಗೊಂಡ ಕೆಲವು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಿದ್ದು, ಕಾರಣಾಂತರಗಳಿಂದ ಇನ್ನೂ ಕೆಲವು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವುದು ಬಾಕಿ ಇರುವ ಪ್ರಕರಣಗಳನ್ನು ಪರಿಶೀಲಿಸಿ ಅಂತಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಕ್ರಮವಹಿಸಲಾಗುತ್ತಿದೆ. ಅಲ್ಲದೇ, ಮಾನ್ಯ ನ್ಯಾಯಲಯಗಳು ಈಗಾಗಲೇ ನಿರ್ದೇಶನ ನೀಡಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ದಿನಾಂಕ: 06.07.2020ರ ಸುತ್ತೋಲೆಯಿಂದ ವಿನಾಯಿತಿ ನೀಡಲಾಗುತ್ತಿದೆ.

ಅನುಕಂಪ ಆಧಾರದ ನೇಮಕಾತಿ ಪ್ರಕರಣಗಳಿಗೆ ಸಂಬಂಧಿಸಿದಂತೆ ನೇಮಕಾತಿ ಆದೇಶ ನೀಡಲು ಸುತ್ತೋಲೆ ಸಂಖ್ಯೆ: ಆಇ 05 ಬಿಇಎಂ 2020, ದಿನಾಂಕ: 12.01.2021ರನ್ವಯ ಸಹಮತಿಸಲಾಗಿದೆ.

ಆಡಳಿತ ಇಲಾಖೆಗಳು ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸಂಬಂಧ ದಿನಾಂಕ: 06.07.2020ರ ಸುತೋಲೆಯಿಂದ ವಿನಾಯಿತಿಯನ್ನು ಕೋರಿ ಸ್ವೀಕೃತವಾಗುವ ಪ್ರಸಾವನೆಗಳನ್ನು ಪರಿಶೀಲಿಸಿ 01.04.2021ರ ನಂತರ ನೇಮಕಾತಿ ಆದೇಶ ನೀಡಲು ಆರ್ಥಿಕ ಇಲಾಖೆಯಿಂದ ಸಹಮತಿಸಲಾಗುತ್ತಿದೆ. ಪ್ರತಿ ಇಲಾಖೆಗೆ ನಿಗದಿಪಡಿಸಿರುವ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು ಅವಶ್ಯವಿರುವ ಸಿಬ್ಬಂದಿಯನ್ನು ಭರ್ತಿ ಮಾಡಲು ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ವೃಂದವಾರು ಪರಿಶೀಲಿಸಿ, ಅನುಮತಿ ನೀಡಲಾಗುತ್ತಿದೆ. ಅಂದರೆ, ಇಲಾಖೆಗಳಿಗೆ ನಿಗದಿಪಡಿಸಿರುವ ಕೆಲಸಗಳನ್ನು ನಿರ್ವಹಿಸಲು ಅಗತ್ಯವಿರುವ ಹುದ್ದೆಗಳ ಭರ್ತಿಗೆ ಆರ್ಥಿಕ ಮಿತವ್ಯಯ ಆದೇಶದಿಂದ ವಿನಾಯಿತಿ ನೀಡಲು ಕ್ರಮವಹಿಸಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ, ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ 15,000 ಪಧವೀದರ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆ ಭರ್ತಿ ಗೆ ಅನುಮತಿ ನೀಡಲಾಗಿದೆ.

ಸಂಪನ್ಮೂಲದ ಕ್ರೋಢೀಕರಣವು ಸಹಜ ಸ್ಥಿತಿಗೆ ಮರಳಿದ ನಂತರ ಆರ್ಥಿಕ ಇಲಾಖೆಯಿಂದ ಹೊರಡಿಸಲಾದ ಆರ್ಥಿಕ ಮಿತವ್ಯಯ ಆದೇಶವನ್ನು ಸಡಿಲಿಸುವ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ: ಆಇ 14 ಬಿಜಿಎಲ್ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 17/02/2022 12:02 PM